**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

**ಕ್ರಿ.ಮೊ. ಸಂಖ್ಯೆ 480/2025**

ಪಿರ್ಯಾದಿ ಃ ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

-ವಿರುದ್ಧ-

ಆರೋಪಿ/ತರುಃ 1. ರಂಗನಾಥ ಬಿನ್ ಈಶ್ವರಪ್ಪ
2.ಸಿ.ಪಿ.ರವಿ ಬಿನ್ ಪಾಪಣ್ಣ

********

ಆ ರೋ ಪ ಣೆ

ದಿನಾಂಕ 19.01.2025 ರಂದು ಬೆಳಗ್ಗೆ 06.00 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೋಲೀಸ್ ಠಾಣಾ ಸರಹದ್ದಿನಲ್ಲಿ, ಸಿ.ಪಿ.ಚಂದ್ರಪ್ಪ @ ಟಿ.ಪಿ.ಚಂದ್ರಪ್ಪರವರು ತನ್ನ ಮಗಳ ಮದುವೆಯ ಲಗ್ನ ಪತ್ರಿಕೆ ಕೊಡುವ ಸಲುವಾಗಿ ತನ್ನ ಸ್ನೇಹಿತನಾದ 1 ನೇ ಆರೋಪಿಯಾದ ನಿಮ್ಮ ಜೊತೆ ಕೆಎಃ30/ಜೆ-1192 ನೊಂದಣಿಯ ಹೀರೋ ಹೊಂಡಾ ಸ್ಪೆಂಡರ್ ಪ್ಲಸ್ ಬೈಕಿನ ಹಿಂಬದಿ ಸೀಟಿನಲ್ಲಿ ಕುಳಿತುಕೊಂಡು ತರೀಕೆರೆಯಿಂದ ಹೊರಟು ಹುಲಿತಿಮ್ಮಾಪುರ ಕಡೆಗೆ ಲಿಂಗದಹಳ್ಳಿ-ಹುಲಿತಿಮ್ಮಾಪುರ ಟಾರು ರಸ್ತೆಯಲ್ಲಿ ಕಲ್ಲತ್ತಿಗಿರಿ ನೀರು ಹರಿಯುವ ಹಳ್ಳದ ಸೇತುವೆಯ ಮುಂದೆ ವೆಲ್ಡಿಂಗ್ ಲೋಕಣ್ಣರವರ ತೋಟದ ಹತ್ತಿರ ಬೆಳಿಗ್ಗೆ 08.45 ಗಂಟೆ ಸಮಯದಲ್ಲಿ ಹೋಗುತ್ತಿರುವಾಗ, 1 ನೇ ಆರೋಪಿಯಾದ ನೀವು ಸದರಿ ಬೈಕನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಹೋಗಿ ರಸ್ತೆಯ ಪಕ್ಕದಲ್ಲಿದ್ದ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆಸಿ ಅಪಘಾತ ಪಡಿಸಿದ್ದು, ಆದ್ದರಿಂದ 1 ನೇ ಆರೋಪಿಯಾದ ನೀವು ಬಿ.ಎನ್.ಎಸ್. ಕಲಂ 281 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ 1 ನೇ ಆರೋಪಿಯಾದ ನೀವು ಕೆಎಃ30/ಜೆ-1192 ನೊಂದಣಿಯ ಹೀರೋ ಹೊಂಡಾ ಸ್ಪೆಂಡರ್ ಪ್ಲಸ್ ಬೈಕನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಹೋಗಿ ರಸ್ತೆಯ ಪಕ್ಕದಲ್ಲಿದ್ದ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆಸಿ ಅಪಘಾತ ಪಡಿಸಿದ ಪರಿಣಾಮ ಬೈಕಿನ ಹಿಂಬದಿ ಕುಳಿತಿದ್ದ ಚಂದ್ರಪ್ಪನ ತಲೆಗೆ ತೀವ್ರ ತರವಾದ ಪೆಟ್ಟಾಗಿ ಹೆಚ್ಚಿನ ರಕ್ತಸ್ರಾವವಾಗಿ ಚಿಕಿತ್ಸೆ ಫಲಕಾರಿಯಾಗದೆ ದಿನಾಂಕ 19.01.2025 ರಂದು ಮಧ್ಯಾಹ್ನ 01.30 ಗಂಟೆ ಸಮಯದಲ್ಲಿ ಶಿವಮೊಗ್ಗದ ಮ್ಯಾಕ್ಸ್ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದು, ಆದ್ದರಿಂದ 1 ನೇ ಆರೋಪಿಯಾದ ನೀವು ಬಿ.ಎನ್.ಎಸ್. ಕಲಂ 106(ಎ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ 1 ನೇ ಆರೋಪಿಯಾದ ನೀವು ಕೆಎಃ30/ಜೆ-1192 ನೊಂದಣಿಯ ಹೀರೋ ಹೊಂಡಾ ಸ್ಪೆಂಡರ್ ಪ್ಲಸ್ ಬೈಕನ್ನು ಚಾಲನಾ ಪರವಾನಗಿ ಇಲ್ಲದೆ ಚಾಲನೆ ಮಾಡಿದ್ದು, ಆದ್ದರಿಂದ 1 ನೇ ಆರೋಪಿಯಾದ ನೀವು ಮೋಟಾರು ವಾಹನ

ಕಾಯ್ದೆ ಕಲಂ 181 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ 2 ನೇ ಆರೋಪಿಯಾದ ನೀವು ನಿಮ್ಮ ಬಾಬ್ತು ಕೆಎ:30/ಜೆ-1192 ನೊಂದಣಿಯ ಹೀರೋ ಹೊಂಡಾ ಸ್ಪೆಂಡರ್ ಪ್ಲಸ್ ಬೈಕನ್ನು ಚಾಲನಾ ಪರವಾನಗಿ ಇಲ್ಲದ 1 ನೇ ಆರೋಪಿಗೆ ಚಾಲನೆ ಮಾಡಲು ನೀಡಿದ್ದು, ಆದ್ದರಿಂದ 2 ನೇ ಆರೋಪಿಯಾದ ನೀವು ಮೋಟಾರು ವಾಹನ ಕಾಯ್ದೆ ಕಲಂ 180 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ 2 ನೇ ಆರೋಪಿಯಾದ ನೀವು ನಿಮ್ಮ ಬಾಬ್ತು ಕೆಎ:30/ಜೆ-1192 ನೊಂದಣಿಯ ಹೀರೋ ಹೊಂಡಾ ಸ್ಪೆಂಡರ್ ಪ್ಲಸ್ ಬೈಕನ್ನು ಅರ್ಹತಾ ಪತ್ರ ಇಲ್ಲದ ಬೈಕನ್ನು 1 ನೇ ಆರೋಪಿಗೆ ಚಾಲನೆ ಮಾಡಲು ನೀಡಿದ್ದು, ಆದ್ದರಿಂದ 2 ನೇ ಆರೋಪಿಯಾದ ನೀವು ಮೋಟಾರು ವಾಹನ ಕಾಯ್ದೆ ಕಲಂ 192 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ 2 ನೇ ಆರೋಪಿಯಾದ ನೀವು ನಿಮ್ಮ ಬಾಬ್ತು ಕೆಎ:30/ಜೆ-1192 ನೊಂದಣಿಯ ಹೀರೋ ಹೊಂಡಾ ಸ್ಪೆಂಡರ್ ಪ್ಲಸ್ ಬೈಕನ್ನು ವಿಮೆ ಮಾಡಿಸದೆ ಇದ್ದು, ಆದ್ದರಿಂದ 2 ನೇ ಆರೋಪಿಯಾದ ನೀವು ಮೋಟಾರು ವಾಹನ ಕಾಯ್ದೆ ಕಲಂ 196 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಪ್ರಶ್ನೆ 1) ಈಗ ಓದಿ ಹೇಳಲಾದ ಆರೋಪಣೆಯನ್ನು ಕೇಳಿ ತಿಳಿದುಕೊಂಡಿರಾ?
ಉತ್ತರಃ-
1 ನೇ ಆರೋಪಿಃ ಹೌದು
2 ನೇ ಆರೋಪಿಃಹೌದು

ಪ್ರಶ್ನೆ 2) ನೀವು ಆರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆ?
ಉತ್ತರಃ-
1 ನೇ ಆರೋಪಿಃ ವಿಚಾರಣೆಯಾಗಬೇಕು
2 ನೇ ಆರೋಪಿಃ ವಿಚಾರಣೆಯಾಗಬೇಕು

(ಮೇಲ್ಕಂಡ ಆಪಾದನೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ, ಕೇಳಿದ ನಂತರ ಆರೋಪಿ ಕೊಟ್ಟ ಉತ್ತರವನ್ನು ನಾನೇ ಯಥಾವತ್ತಾಗಿ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆಯೆಂದು ದೃಢೀಕರಿಸುತ್ತೇನೆ.)

ದಿನಾಂಕಃ 10.02.2026

ಸಹಿ
**(ಉರ್ಮಿಳ.ವಿ.)**
**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ**.**ದ**.**ನ್ಯಾ**.**ದಂ**.,** ತರೀಕೆರೆ**.**